# ಕರ್ನಾಟಕ ಸರ್ಕಾರ

ಸಂಖ್ಯೆ: ಪಸಂಮೀ 63 ಮೀಇಯೋ 2014

ಕರ್ನಾಟಕ ಸರ್ಕಾರ ಸಚಿವಾಲಯ
ವಿಕಾಸಸೌಧ
ಬೆಂಗಳೂರು, ದಿನಾಂಕ:13.05.2015

## ಅಧಿಸೂಚನೆ

ಕರ್ನಾಟಕ ಕರಾವಳಿ ಮೀನುಗಾರಿಕೆ (ನಿಯಂತ್ರಣ) ಕಾಯಿದೆ 1986ರ ನಿಯಮ 3 ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಮತ್ತು ಈ ಹಿಂದೆ ಹೊರಡಿಸಲಾಗಿದ್ದ ಅಧಿಸೂಚನೆ ಸಂಖ್ಯೆ: ಪಸಂಮೀ/12/ಮೀಇಇ/2007, ದಿನಾಂಕ:30/07/2007ನ್ನು ರದ್ದುಗೊಳಿಸಿ ಕರ್ನಾಟಕದ ಕರಾವಳಿಯಲ್ಲಿ ಯಾವುದೇ ಬಲೆಗಳನ್ನು / ಸಾಧನಗಳನ್ನು ಉಪಯೋಗಿಸಿ, ಮೀನುಗಾರಿಕೆಗಾಗಿ ಯಾಂತ್ರಿಕ ದೋಣಿಗಳ ಬಳಕೆಯನ್ನು ಮುಂದಿನ ಆದೇಶದವರಗೆ ಕೆಳಕಂಡಂತೆ ನಿಷೇದಿಸಿದೆ.

ಕರ್ನಾಟಕ ಕರಾವಳಿಯ ಮೂರು ಜಿಲ್ಲೆಗಳಾದ, ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ನಿಷೇದಿತ ಅವಧಿಯು ಜೂನ್ 1 ರಿಂದ ಜುಲೈ 31ರವರಗೆ ಪ್ರತಿ ವರ್ಷ ಒಟ್ಟು 61 ದಿನಗಳ (2 ದಿನಗಳೂ ಸೇರಿ) ಅವಧಿಗೆ ಏಕ ರೂಪದ ಮೀನುಗಾರಿಕೆ ನಿಷೇಧ ಜಾರಿಯಲ್ಲಿರುತ್ತದೆ.

ಆದಾಗ್ಯೂ, ಮೇಲ್ಕಂಡ ನಿಷೇಧದ ಅವಧಿಯಲ್ಲಿ ಕರ್ನಾಟಕದ 3 ಕರಾವಳಿ ಜಿಲ್ಲೆಗಳಲ್ಲಿ ದೋಣಿಯನ್ನು ಸಾಗಿಸುವ ಉದ್ದೇಶಕ್ಕಾಗಿಯೇ 10 ಅಶ್ವಶಕ್ತಿಯವರೆಗಿನ ಸಾಮರ್ಥ್ಯದ ಮೋಟಾರೀಕೃತ ದೋಣಿ ಹಾಗೂ ಸಾಂಪ್ರದಾಯಿಕ / ನಾಡ ದೋಣಿಗಳು ಕರಾವಳಿ ಮೀನುಗಾರಿಕೆಯನ್ನು ಕೈಗೊಳ್ಳಲು ಅನುಮತಿಸಿದೆ.

ಸರ್ಕಾರದ ಈ ಆದೇಶವನ್ನು ಉಲ್ಲಂಘಿಸುವ ಮೀನುಗಾರಿಕಾ ದೋಣಿಗಳು ಮತ್ತು ಮೀನುಗಾರರು ಕರ್ನಾಟಕ ಕಡಲ ಮೀನುಗಾರಿಕೆ ಕಾಯ್ದೆ-1986ರಲ್ಲಿ ವಿಧಿಸಲಾಗಿರುವ ದಂಡನೆಗಳಿಗೆ ಹೊಣೆಯಾಗುವುದಲ್ಲದೇ ಒಂದು ವರ್ಷದ ಅವಧಿಗೆ ಡೀಸೆಲ್ ಮೇಲಿನ ಸಹಾಯಧನ ಪಡೆಯಲು ಅನರ್ಹರಾಗುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಶ್ಮಿ ಶಿವಶಂಕರ ಪೋಳ)
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
(ಮೀನುಗಾರಿಕೆ)

ಇವರಿಗೆ:
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು-ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಮತ್ತು ಅದರ 50 ಪ್ರತಿಗಳನ್ನು ಒದಗಿಸಲು ಕೋರಿದೆ.

ಪ್ರತಿ:

1. ಭಾರತ ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಕೃಷಿ ಮಂತ್ರಾಲಯ, ಪಶುಸಂಗೋಪನೆ, ಹೈನುಗಾರಿಕೆ ಮತ್ತು ಮೀನುಗಾರಿಕೆ ಇಲಾಖೆ, ಕೃಷಿ ಭವನ, ನವದೆಹಲಿ-110001.

-2-